ಐಟಿಐ ಕಾಲೇಜು ಮಂಜೂರು ಮಾಡುವುದು

930 (1139); ಶ್ರೀ ಕೃಷ್ಣಾರೆಡ್ಡಿ ಎಂ. (ಚಿಂತಾಮಣಿ)

ಅ) ಚಿಂತಾಮಣಿ ವಿಧಾನಸಭಾ ಕ್ಷೇತ್ರದಲ್ಲಿ ಹೊಸದಾಗಿ ಐಟಿಐ ಕಾಲೇಜು ಪ್ರಾರಂಭಿಸಬೇಕೆಂಬ ಪ್ರಸ್ತಾವನೆ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದಲ್ಲಿ ಇದನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಪಿ.ಟಿ. ಪರಮೇಶ್ವರ ನಾಯ್ಕ (ಮಾನ್ಯ ಕಾರ್ಮಿಕ ರಾಜ್ಯ ಸಚಿವರು)

ಅ) ಹೌದು.

ಆ) ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ತಾಲ್ಲೂಕಿನಲ್ಲಿ ನಾಲ್ಕು (04) ಅನುದಾನರಹಿತ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳು ಕಾರ್ಯ ನಿರ್ವಹಿಸುತ್ತಿದ್ದು, ಈ ಮೂಲಕ ಆ ಭಾಗದ ಯುವಜನತೆಗೆ ಕೌಶಲ್ಯ ತರಬೇತಿಯನ್ನು ನೀಡಲಾಗುತ್ತಿದೆ. ಸ್ಥಳೀಯ ಬೇಡಿಕೆ, ಅಗತ್ಯತೆ ಮತ್ತು ಅನುದಾನದ ಲಭ್ಯತೆ ಆಧರಿಸಿ ಮುಂಬರುವ ವರ್ಷಗಳಲ್ಲಿ ಚಿಂತಾಮಣಿ ತಾಲ್ಲೂಕಿನಲ್ಲಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯನ್ನು ಪ್ರಾರಂಭಿಸುವ ಬಗ್ಗೆ ಪರಿಶೀಲಿಸಿ ಅಗತ್ಯ ಕ್ರಮ ಜರುಗಿಸಲಾಗುವುದು.